# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 128 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರಸ್ತುತ ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿದ ಕುಟುಂಬಗಳ ಸಂಖ್ಯೆ ಎಷ್ಟು;</td><td>ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಆದ್ಯತಾ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th>ಜಿಲ್ಲೆ</th><th>ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗಳು</th><th>ಆದ್ಯತಾ ಪಡಿತರ ಚೀಟಿಗಳು</th><th>ಒಟ್ಟು</th></tr>
<tr><td>ಬೆಳಗಾವಿ</td><td>67934</td><td>1078420</td><td>1,146,354</td></tr>
<tr><td>ವಿಜಯಪುರ</td><td>41166</td><td>468709</td><td>509,875</td></tr>
<tr><td>ಬಾಗಲಕೋಟೆ</td><td>45624</td><td>374884</td><td>420,508</td></tr>
</table></td></tr>
<tr><td>ಆ</td><td>ಇತ್ತೀಚೆಗೆ ರಾಜ್ಯದಲ್ಲಿ ಸುಮಾರು 14 ಲಕ್ಷ ಬಿಪಿಎಲ್ ಕಾರ್ಡ್‌ಗಳು ರದ್ದಾಗಿರುವುದು ನಿಜವೇ; ಇದ್ದಲ್ಲಿ, ಯಾವ ಮಾನದಂಡಗಳ ಆಧಾರದ ಮೇಲೆ ರದ್ದು ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)</td><td rowspan="2">ಸರ್ಕಾರದ ಮಾನದಂಡಗಳನ್ವಯ ಕುಟುಂಬ ತಂತ್ರಾಂಶದಿಂದ ಐ.ಟಿ. ತೆರಿಗೆ ಪಾವತಿದಾರರು, ವಾರ್ಷಿಕ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 6 ತಿಂಗಳಿನಿಂದ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆದು, ಸದರಿ ಪಡಿತರ ಚೀಟಿಗಳನ್ನು ಅಮಾನತ್ತಿನಲ್ಲಿ/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿತ್ತು.</td></tr>
<tr><td>ಇ</td><td>ಅರ್ಹರ ಬಿಪಿಎಲ್ ಕಾರ್ಡ್‌ಗಳನ್ನು ಏಕಾಏಕಿ ರದ್ದು ಮಾಡಿರುವುದು</td></tr>
</table>

| | | |
|---|---|---|
| | ನಿಜವೇ; ನಿಜವಿದ್ದಲ್ಲಿ ಯಾವ ಕಾರಣಕ್ಕಾಗಿ ಮತ್ತು ಯಾವ ಆದೇಶದ ಮೇಲೆ ರದ್ದುಗೊಳಿಸಲಾಗಿದೆ; ಬಡ ಕುಟುಂಬಗಳ ಬಿಪಿಎಲ್ ಕಾರ್ಡ್ ಗಳನ್ನು ರದ್ದು ಮಾಡಲು ಕಾರಣಗಳೇನು? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಮೇಲ್ಕಂಡ ಮಾನದಂಡಗಳನ್ವಯ ಪುನರ್ ಪರಿಶೀಲಿಸಿ ಆದಾಯ. ತೆರಿಗೆ ಪಾವತಿದಾರರು ಹಾಗೂ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಆದ್ಯತಾ ಪಡಿತರ ಚೀಟಿಗಳನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ. |

ಆನಾಸ **361 ಡಿಆರ್ಎ 2024**

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು